ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯದಲ್ಲಿ ತೀವ್ರ ನಿಗಾ ಘಟಕ ಸ್ಥಾಪನೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

548(601) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇತ್ತೀಚೆಗೆ ತೀವ್ರ ನಿಗಾ ಘಟಕಗಳ ಅವಶ್ಯಕತೆ ಹೆಚ್ಚಾಗಿದ್ದು ಇದನ್ನು ಈಡೇರಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ರಾಜ್ಯದ ಎಷ್ಟು ತಾಲ್ಲೂಕು ಆಸ್ಪತ್ರೆಗಳಲ್ಲಿ ತೀವ್ರ ನಿಗಾ ಘಟಕಗಳ ವ್ಯವಸ್ಥೆ ಇದೆ ;

(ಇ) ಇನ್ನೂ ಎಷ್ಟು ತಾಲ್ಲೂಕು ಆಸ್ಪತ್ರೆಗಳಲ್ಲಿ ಈ ಘಟಕಗಳನ್ನು ಸ್ಥಾಪಿಸಲು ಬಾಕಿ ಇದೆ ;

(ಈ) ಉಳಿದ ತಾಲ್ಲೂಕುಗಳಲ್ಲಿ ಯಾವ ಕಾಲಮಿತಿಯಲ್ಲಿ ಈ ಘಟಕಗಳನ್ನು ಸ್ಥಾಪಿಸಲಾಗುವುದು ;

(ಉ) ಈ ತೀವ್ರ ನಿಗಾ ಘಟಕಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?